Akashvani : Bangalore
Regional Bulletin In Kannada
14.10.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಹುಬ್ಬಳ್ಳಿ ಪ್ರಕರಣವಲ್ಲದೆ ರೈತರು, ವಿದ್ಯಾರ್ಥಿಗಳ ಪ್ರಕರಣ ಹಿಂಪಡೆಯಲಾಗಿದೆ- ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಮರ್ಥನೆ
- ಹುಬ್ಬಳ್ಳಿ ಗಲಭೆ ಪ್ರಕರಣದಲ್ಲಿ ಸರ್ಕಾರದ ಕ್ರಮ ಖಂಡಿಸಿ ಬಿಜೆಪಿ ಪ್ರತಿಭಟನೆ
- ಸಂಡೂರಿನಲ್ಲಿ ರಾಜೀವ್‌ಗಾಂಧಿ ವಸತಿ ನಿಗಮದ ಫಲಾನುಭವಿಗಳಿಗೆ ಹಕ್ಕುಪತ್ರ ಹಸ್ತಾಂತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಭಟ್ಕಳದ ನೇತ್ರಾಣಿ ದ್ವೀಪದಲ್ಲಿ ಭಾರತೀಯ ನೌಕಾಪಡೆ ಸಮರಾಭ್ಯಾಸ ಹಿನ್ನೆಲೆ; ಮೀನುಗಾರಿಕೆ ನಿಷೇಧ
- ಹಾವೇರಿ ಜಿಲ್ಲೆಯಲ್ಲಿ ಧಾರಾಕಾರ ಮಳೆಯಿಂದ ಅಪಾರ ಪ್ರಮಾಣದ ಬೆಳೆಹಾನಿ

<><*<><>*><>

ಹುಬ್ಬಳ್ಳಿ ಪ್ರಕರಣ ಮಾತ್ರವಲ್ಲ ರೈತರು, ವಿದ್ಯಾರ್ಥಿಗಳು, ಸಾಮಾನ್ಯ ಜನರು ಕೈಗೊಂಡಿದ್ದ ಪ್ರತಿಭಟನೆಯ ಪ್ರಕರಣಗಳನ್ನೂ ಹಿಂಪಡೆಯಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾನೂನಿನ ಚೌಕಟ್ಟಿನಲ್ಲಿ ಹಿಂಪಡೆಯುವ ಪ್ರಕ್ರಿಯೆ ನಡೆಸಲಾಗಿದ್ದು, ಕೋರ್ಟ್ ಒಪ್ಪಿದರೆ ಪ್ರಕರಣ ಹಿಂಪಡೆಯಲಾಗುವುದು. ಇಲ್ಲವಾದರೆ ಪ್ರಕರಣಗಳು ಮುಂದುವರಿಯುತ್ತವೆ ಎಂದು ತಿಳಿಸಿದ್ದಾರೆ. ಒಟ್ಟು ೫೮ ಪ್ರಕರಣಗಳಲ್ಲಿ ೪೩ ಪ್ರಕರಣಗಳನ್ನು ಹಿಂಪಡೆಯಲಾಗಿದೆ ಎಂದು ಹೇಳಿದ್ದಾರೆ. ಖರ್ಗೆ ಒಡೆತನದ ಸಿದ್ಧಾರ್ಥ ಟ್ರಸ್ಟ್ ನಿವೇಶನ ವಾಪಸ್ ನೀಡಿರುವ ಕುರಿತು ಪ್ರತಿಕ್ರಿಯಿಸಿ, ಕಾನೂನು ಉಲ್ಲಂಘನೆ ಮಾಡದೆ ನಿವೇಶನ ಪಡೆದುಕೊಂಡಿದ್ದು, ಆಪಾದನೆ ಮಾಡುತ್ತಿರುವುದರಿಂದ ಬೇಡ ಎಂದು ಹಿಂದಿರುಗಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಹುಬ್ಬಳ್ಳಿ ಗಲಭೆ ಪ್ರಕರಣ ಹಿಂಪಡೆಯುದನ್ನು ವಿರೋಧಿಸಿ ಬಿಜೆಪಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿತು. ಅಲ್ಪಸಂಖ್ಯಾತರ ತುಷ್ಟೀಕರಣಕ್ಕಾಗಿ ದೇಶದ್ರೋಹಿಗಳನ್ನು ರಕ್ಷಿಸುವ ಕೆಲಸವನ್ನು ಕಾಂಗ್ರೆಸ್ ಸರಕಾರ ಮಾಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಹುಬ್ಬಳ್ಳಿ ಘಟನೆ ಕುರಿತಂತೆ ಎನ್‌ಐಎ ತನಿಖೆ

ನಡೆಯುತ್ತಿದ್ದು ಪ್ರಕರಣ ವಾಪಾಸ್ ಪಡೆದಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸಿದ್ದರಾಮಯ್ಯನವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಡುವುದು ನಿಶ್ಚಿತ ಎಂದು ಇದೇ ಸಂದರ್ಭದಲ್ಲಿ ಪುನರುಚ್ಛರಿಸಿದರು. ಬಡವರಿಗೆ ಮೀಸಲಿಟ್ಟ ನಿವೇಶನಗಳನ್ನು ಮೈಸೂರಿನಲ್ಲಿ ಮುಖ್ಯಮಂತ್ರಿಗಳ ಕುಟುಂಬವೇ ಲೂಟಿ ಮಾಡಿದೆ. ಎಸ್ಇಪಿ, ಟಿಎಸ್‌ಪಿ ಹಣ ದುರುಪಯೋಗದ ಕುರಿತು ಜನರು ಚರ್ಚೆ ಮಾಡುತ್ತಿದ್ದು ರಾಜ್ಯದಲ್ಲಿ ಅಭಿವೃದ್ಧಿಯೇ ಇಲ್ಲವಾಗಿದೆ ಎಂದು ದೂರಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳ, ಡಾ. ಸಿ.ಎನ್. ಅಶ್ವತ್ಥನಾರಾಯಣ್ ಸೇರಿದಂತೆ ಹಲವು ಮುಖಂಡರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

<><*<><>*><>

ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ರಾಜೀವ್ ಗಾಂಧಿ ವಸತಿ ನಿಗಮದಿಂದ ೧೩೫ ಕೋಟಿ ವೆಚ್ಚದಲ್ಲಿ ನಿರ್ಮಿಸುತ್ತಿರುವ ಪೂರ್ಣಗೊಂಡ ೫೦೦ ಮನೆಗಳನ್ನು ಫಲಾನುಭವಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಹಸ್ತಾಂತರಿಸಿದರು. ಉಳಿದ ಮನೆಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ಇದಕ್ಕೂ ಮೊದಲು ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿನ ನಾರಿಹಳ್ಳ ಜಲಾಶಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಾಗಿನ ಅರ್ಪಿಸಿದರು. ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ ಬಳಿಕ ನಾರಿಹಳ್ಳ ಜಲಾಶಯಕ್ಕೆ ಬಾಗೀನ ಅರ್ಪಿಸಿದ ಎರಡನೇ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಿದ್ದಾರೆ. ಈ ಅಣೆಕಟ್ಟು ೦.೮೧೦ ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು ೭೧೫ ಕಿಲೋಮೀಟರ್ ವಿಸ್ತೀರ್ಣ ಇದೆ. ಈ ಜಲಾಶಯ ಸಂಡೂರಿನ ೨೦ ಗ್ರಾಮಗಳಿಗೆ ಕುಡಿಯುವ ನೀರಿಗೆ ಆಧಾರವಾಗಿದೆ. ಈ ವೇಳೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್, ಕಾರ್ಮಿಕ ಸಚಿವ ಸಂತೋಷ್ ಎಸ್ ಲಾಡ್ ಸೇರಿ ಹಲವರು ಉಪಸ್ಥಿತರಿದ್ದರು.

<><*<><>*><>

ಇದೇ ವರ್ಷದ ಡಿಸೆಂಬರ್ ನಲ್ಲಿ ಮಂಡ್ಯದಲ್ಲಿ ನಡೆಯಲಿರುವ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತಿಗಳನ್ನೇ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಬೇಕೆಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎನ್.ಎಲ್.ಮುಕುಂದರಾಜ್ ಮನವಿ ಮಾಡಿದ್ದಾರೆ. ಮಂಡ್ಯದಲ್ಲಿ ಪತ್ರಿಕಾ ಸಂವಾದದಲ್ಲಿ ಮಾತನಾಡಿದ ಅವರು, ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತಿಗಳನ್ನೇ ಸರ್ವಾಧ್ಯಕ್ಷರನ್ನಾಗಿ ಮಾಡುವುದು ಸೂಕ್ತ. ಬೇರೆ ಕ್ಷೇತ್ರದ ಸಾಧಕರು ಸಮ್ಮೇಳನಾಧ್ಯಕ್ಷರಾವುದು ಸರಿಯಾದ ಕ್ರಮವಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ವಸ್ತುಗಳು, ಪದಾರ್ಥಗಳು ಮತ್ತು ಸೇವೆಗಳ ಗುಣಮಟ್ಟಕ್ಕೆ ಕೇಂದ್ರ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಉತ್ತರ ಪ್ರದೇಶದ ನೋಯ್ಡಾದಲ್ಲಿ ವಿಶ್ವ ಗುಣಮಟ್ಟ ದಿನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗುಣಮಟ್ಟದ ವಿಷಯವನ್ನು ಸರ್ಕಾರ ಎಲ್ಲ ಹಂತಗಳಲ್ಲಿ ಪಾಲಿಸುತ್ತಿದೆ. ಭಾರತ ಇಂದು, ಮೂಲಸೌಕರ್ಯ, ಬ್ರಾಡ್‌ಬ್ಯಾಂಡ್ ಮತ್ತು ಮೊಬೈಲ್ ಸೇವೆ, ಒಂದೇ ಭಾರತ್ ಎಕ್ಸ್‌ಪ್ರೆಸ್ ಸೇರಿದಂತೆ ವಿವಿಧ ವಲಯಗಳಲ್ಲಿ ವಿಶ್ವದರ್ಜೆಯ ಗುಣಮಟ್ಟ ಕಾಪಾಡಿಕೊಂಡಿದೆ ಎಂದರು. ಇವು ಮೇಕ್ ಇನ್ ಇಂಡಿಯಾ ಆಂದೋಲನಕ್ಕೂ ಪೂರಕವಾಗಿವೆ. ಅಲ್ಲದೆ, ಗುಣಮಟ್ಟವಲ್ಲದ ಸರಕುಗಳಲ್ಲಿ ಗುಣಮಟ್ಟ ಸುಧಾರಿಸಲು ನೆರವಾಗುತ್ತಿವೆ ಎಂದು ಹೇಳಿದರು.

<><*<><>*><>

ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ, ಬಿದರಕ್ಕ ಗ್ರಾಮದಲ್ಲಿ ಇಂದು ಕೊಳಲು ಗೋಪಾಲಕೃಷ್ಣ ದೇವಾಲಯದ ಉದ್ಘಾಟನಾ ಕಾರ್ಯಕ್ರಮವನ್ನು ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ನೆರವೇರಿಸಿದರು. ಶ್ರೀ ಕೊಳಲು ಗೋಪಾಲಕೃಷ್ಣ ದೇವಾಲಯ ಉದ್ಘಾಟನೆ ಬಳಿಕ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎಚ್.ಡಿ.ರೇವಣ್ಣ ಸೇರಿದಂತೆ ಹಲವು ಜೆಡಿಎಸ್ ಮುಖಂಡರು ಭಾಗಿಯಾಗಿದ್ದರು.

<><*<><>*><>

ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕಿನ ಅರಬ್ಬಿ ಸಮುದ್ರದ ನಡುವೆ ಇರುವ ನೇತ್ರಾಣಿ ದ್ವೀಪದಲ್ಲಿ ಭಾರತೀಯ ನೌಕಾ ಪಡೆ ಸಮರಭ್ಯಾಸ ನಡೆಸಲಿರುವ ಹಿನ್ನೆಲೆಯಲ್ಲಿ, ನೇತ್ರಾಣಿ ನಡುಗಡ್ಡೆಯಿಂದ ಹತ್ತು ನಾಟಿಕಲ್ ಮೈಲು ದೂರದವರೆಗೆ ಇಂದಿನಿಂದ ಮೂರು ದಿನಗಳ ಕಾಲ ಮೀನುಗಾರಿಕೆ ನಿಷೇಧಿಸಲಾಗಿದೆ. ನೇತ್ರಾಣಿ ನಡುಗಡ್ಡೆಯ ೧೦ ನಾಟಿಕಲ್ ಮೈಲು ವ್ಯಾಪ್ತಿಯ ಪ್ರದೇಶದಲ್ಲಿ ಮೀನುಗಾರಿಕೆ ನಡೆಸದಂತೆ ಭಟ್ಕಳ ತಾಲೂಕಿನ ಪಾತಿ ದೋಣಿಯವರಿಗೆ, ಗಿಲ್ ನೆಟ್ ದೋಣಿಯವರಿಗೆ, ಫಿಶಿಂಗ್ ಬೋಟ್, ಪರ್ಶಿಯನ್ ಬೋಟ್ ಸೇರಿದಂತೆ ಆಳ ಸಮುದ್ರ ಮೀನುಗಾರಿಕಾ ಬೋಟ್ ಗಳಿಗೆ ಸೂಚನೆ ನೀಡಲಾಗಿದೆ. ನೇತ್ರಾಣಿ ದ್ವೀಪದ ಬಳಿ ಪ್ರವಾಸಿಗರು ಹಾಗೂ ಸ್ಕೂಬಾ ಡೈವಿಂಗ್ ಸಹ ನಿರ್ಬಂಧಿಸಲಾಗಿದೆ.

<><*<><>*><>

ಹಾವೇರಿ ಜಿಲ್ಲೆಯಾದ್ಯಂತ ಮಳೆ ಮುಂದುವರೆದಿದ್ದು, ತುಂಗಭದ್ರಾ, ವರದಾ ಹಾಗೂ ಕುಮದ್ವತಿ ನದಿಗಳು ಅಪಾಯ ಮಟ್ಟದಲ್ಲಿ ಹರಿಯುತ್ತಿವೆ. ನದಿಗಳಿಗೆ ಇಳಿಯದಂತೆ ಜನರಿಗೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ. ಮಳೆಯಿಂದ ಹಾವೇರಿಯ ಐತಿಹಾಸಿಕ ಹೆಗ್ಗೇರಿ ಕೆರೆ ಕೋಡಿ ಬಿದ್ದಿದೆ. ಜಿಲ್ಲೆಯ

ಚಿಕ್ಕಲಿಂಗದಳ್ಳಿ ಬಳಿ ತುಂಗಾ ಮೇಲ್ದಂಡೆ ಯೋಜನೆಯ ಕಾಲುವೆ ಒಡೆದಿದ್ದು, ಜಮೀನುಗಳಿಗೆ ನೀರು ನುಗ್ಗಿದೆ. ಅಪಾರ ಪ್ರಮಾಣದಲ್ಲಿ ಬೆಳೆ ನಷ್ಟವಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಮಧ್ಯೆ ಮಳೆಯಿಂದ ರಾಣೆಬೆನ್ನೂರು ತಾಲ್ಲೂಕಿನ ಮೇಡ್ಲೇರಿ ವಲಯದ ಹೀಲದಹಳ್ಳಿ, ಉದಗಟ್ಟಿ, ಬೇಲೂರು, ಸೋಮಲಾಪುರದಲ್ಲಿ ಭತ್ತದ ಬೆಳೆ ನೆಲಕ್ಕಚ್ಚಿದೆ. ಶಾಸಕ ಪ್ರಕಾಶ್ ಕೋಳಿವಾಡ, ಅಧಿಕಾರಿಗಳೊಂದಿಗೆ ರೈತರ ಜಮೀನುಗಳಿಗೆ ಭೇಟಿ ನೀಡಿ, ಬೆಳೆ ಹಾನಿ ವೀಕ್ಷಣೆ ಮಾಡಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೃಷಿ ಇಲಾಖೆ, ತೋಟಗಾರಿಕೆ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ತಾಲ್ಲೂಕಿನಲ್ಲಿ ಬೆಳೆ ಹಾನಿ ಬಗ್ಗೆ ಸರ್ವೆ ಮಾಡಿ ಸಮಗ್ರ ವರದಿಯನ್ನು ಜಿಲ್ಲಾಧಿಕಾರಿಗೆ ಸಲ್ಲಿಸಲಿದ್ದಾರೆ. ಬಳಿಕ ಪರಿಹಾರ ಕೊಡಿಸುವ ವ್ಯವಸ್ಥೆ ಮಾಡಲಾಗುವುದು' ಎಂದು ಭರವಸೆ ನೀಡಿದರು. ಇನ್ನೊಂದೆಡೆ ಬ್ಯಾಡಗಿಯಲ್ಲಿ ನಿರಂತರ ಸುರಿದ ಮಳೆಗೆ ೨೨೨ ಮನೆಗಳಿಗೆ ನೀರು ನುಗ್ಗಿದ್ದು, ೨೨ ಮನೆಗಳಿಗೆ ಭಾಗಶಃ ಹಾನಿಯಾಗಿದೆ.

<><*<><>*><>

ಗದಗ ನಗರದ ತೋಂಟದಾರ್ಯ ಮಠದಲ್ಲಿ ಡಾ.ತೋಂಟದ ಸಿದ್ಧಲಿಂಗ ಸ್ವಾಮೀಜಿ ಅವರ ೬ನೇ ಪುಣ್ಯಸ್ಮರಣೆ ಅಂಗವಾಗಿ ಇಂದು "ಮರಣವೇ ಮಹಾನವಮಿ" ಆಚರಣೆ ನಡೆಯಿತು. ಕಾರ್ಯಕ್ರಮದಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ್ ನಾಡೋಜ ಡಾ.ಗೊ.ರು.ಚನ್ನಬಸಪ್ಪ ಅವರಿಗೆ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಿದರು. ಈ ವೇಳೆ ಮಾತನಾಡಿದ ಅವರು, ಮಹಾತ್ಮ ಗಾಂಧೀಜಿ ಅವರ ತತ್ವ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡ ನಾಡೋಜ ಡಾ. ಗೊ.ರು. ಚನ್ನಬಸಪ್ಪ, ಸಜ್ಜನಿಕೆಗೆ ಹೆಸರಾದವರು. ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಹಲವಾರು ಸಾಹಿತ್ಯಗಳನ್ನು ರಚಿಸುವ ಮೂಲಕ ನೂರಾರು ಸಾಹಿತಿಗಳಿಗೆ ಪ್ರೇರಣೆಯಾಗಿದ್ದಾರೆ ಎಂದು ತಿಳಿಸಿದರು. ಅವರ ಬದುಕಿನ ಸಾಧನೆಗಾಗಿ ಈ ಪ್ರಶಸ್ತಿ ದೊರೆತಿದೆ ಎಂದು ಹೇಳಿದರು. ಪ್ರಶಸ್ತಿಯು ೫ ಲಕ್ಷ ರೂಪಾಯಿ ಮೊತ್ತವನ್ನು ಹೊಂದಿದೆ.

<><*<><>*><>

ದಾವಣಗೆರೆ ಜಿಲ್ಲೆಯ ೩೨ ಗ್ರಾಮ ಪಂಚಾಯತಿಗಳು ಕ್ಷಯರೋಗ ಮುಕ್ತವಾಗಿವೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ. ಕುಷ್ಠರೋಗ ಅಭಿಯಾನ ಕಾರ್ಯಕ್ರಮದ ಜಿಲ್ಲಾ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಕ್ಷಯರೋಗಿಗಳು ಕಂಡು ಬಂದಿದ್ದ ೩೨ ಗ್ರಾಮ ಪಂಚಾಯತಿಗಳಲ್ಲಿ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಕೈಗೊಂಡ

ಪರಿಣಾಮಕಾರಿ ಕೆಲಸದಿಂದ ಎಲ್ಲ ರೋಗಿಗಳು ಸಂಪೂರ್ಣ ಗುಣಮುಖರಾಗಿದ್ದಾರೆ. ಈ ಗ್ರಾಮಗಳನ್ನು ಕ್ಷಯರೋಗ ಮುಕ್ತ ಎಂದು ಘೋಷಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಇನ್ನು ಸಂಕ್ಷಿಪ್ತಸುದ್ದಿ...

೧. ಕುಡಿಯುವ ನೀರು ಶುದ್ದವಾಗಿದ್ದರೆ ಎಷ್ಟೋ ಕಾಯಿಲೆಯನ್ನು ದೂರ ಮಾಡಬಹುದಾಗಿದೆ ಎಂದು ಬಂಗಾರಪೇಟೆ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಹೇಳಿದ್ದಾರೆ. ಕೋಲಾರದ ಬಂಗಾರಪೇಟೆ ತಾಲೂಕಿನ ಕಾಮಸಮುದ್ರ ಹೋಬಳಿಯಲ್ಲಿ ಶಾಸಕರ ಅನುದಾನದಲ್ಲಿ ನಿರ್ಮಿಸಿರುವ ಶುದ್ದ ಕುಡಿಯುವ ನೀರಿನ ಘಟಕ ಉದ್ಘಾಟಿಸಿ ಅವರು ಮಾತನಾಡಿದರು.

೨. ಪ್ರವಾಸಿಗರನ್ನು ಕರೆ ತಂದಿದ್ದ ಟಿ ಟಿ ವಾಹನ ಅಪಘಾತಕ್ಕೀಡಾಗಿ ಸುಮಾರು ೯ ಪ್ರಯಾಣಿಕರು ಗಾಯಗೊಂಡಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಸಂಪಿಗೆ ಖಾನ್ ಗ್ರಾಮದ ಬಳಿ ಇಂದು ಬೆಳಗ್ಗೆ ನಡೆದಿದೆ. ಬೆಂಗಳೂರಿನಿಂದ ಹೊರನಾಡು ದೇವಾಲಯಕ್ಕೆ ಆಗಮಿಸಿದ ಭಕ್ತರು ದರ್ಶನ ಮುಗಿಸಿ ಹಿಂತಿರುಗುವ ವೇಳೆ ರಸ್ತೆ ಬದಿ ಪಲ್ಟಿಯಾಗಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>